ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕೊಡಗು ಜಿಲ್ಲೆಯಲ್ಲಿ ಕಾಡಾನೆ-ಮಾನವ ಸಂಘರ್ಷ ನಿರಂತರವಾಗಿ ಮುಂದುವರೆಯುತ್ತಿದ್ದು ಅದನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) –

111 (131) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿ ಕಾಡಾನೆ ಮತ್ತು ಮಾನವ ಸಂಘರ್ಷ ನಿರಂತರವಾಗಿ ನಡೆಯುತ್ತಿದ್ದು, ಸದರಿ ಸಂಘರ್ಷಕ್ಕೆ ಸರ್ಕಾರ ಗುರುತಿಸಿರುವ ಪ್ರಮುಖ ಹಾಗೂ ವೈಜ್ಞಾನಿಕ ಕಾರಣಗಳೇನು;

(ಆ) ಸದರಿ ಕಾರಣಗಳನ್ನು ಗುರುತಿಸಿದ ನಂತರದಲ್ಲಿ, ಸರ್ಕಾರ ಈ ಸಮಸ್ಯೆಯನ್ನು ಪರಿಹರಿಸಲು ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಕ್ರಮಗಳನ್ನು ಅನುಷ್ಠಾನಗೊಳಿಸಿದ ನಂತರ ಪ್ರಕರಣಗಳ ಸಂಖ್ಯೆ ಇಳಿಮುಖವಾಗಿದೆಯೇ? (ಜಿಲ್ಲೆಗೆ ಸಂಬಂಧಿಸಿದ ಕಳೆದ 5 ವರ್ಷಗಳ ಅಂಕಿ-ಅಂಶಗಳ ವಿವರವನ್ನು ನೀಡುವುದು)